O

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿ: 19.06.2023

**ಸುತ್ತೋಲೆ**

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿ:09.02.2023 ಮತ್ತು 23.02.2023.

*******

2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:04.02.2023 ರಿಂದ ದಿನಾಂಕ:08.02.2023 ರವರೆಗೆ ಹಾಗೂ ದಿನಾಂಕ:28.02.2023 ಮತ್ತು 29.05.2023 ರಂದು ನಡೆದ 2ನೇ & 3ನೇ ಹಂತದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳು, ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಪ್ರಸ್ತುತ, ಇನ್ನೂ ಉಳಿಕೆಯಾಗಿರುವ ಕಾರ್ಯಭಾರಕ್ಕೆ ಮೂರನೇ ಹಂತದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಮೆರಿಟ್ ಪಟ್ಟಿಯನ್ವಯ ಕೊನೆಯದಾಗಿ ಆಯ್ಕೆ ಹೊಂದಿದ ಅಭ್ಯರ್ಥಿಯ ನಂತರದ ಮೆರಿಟ್ ಸಂಖ್ಯೆಯಿಂದ ಪ್ರಾರಂಭವಾಗುವ ಅಭ್ಯರ್ಥಿಗಳಿಗೆ 2022-23ನೇ ಶೈಕ್ಷಣಿಕ ಸಾಲಿನ ಉಳಿದ ಅವಧಿಗೆ **ದಿನಾಂಕ:21.06.2023 ರಂದು 4ನೇ ಹಂತದ ಆನ್‌ಲೈನ್ ಕೌನ್ಸಿಲಿಂಗ್** ಅನ್ನು ಆಯೋಜಿಸಲಾಗಿದೆ.

ಮುಂದುವರೆದು, ಸರ್ಕಾರಿ ಸಂಸ್ಕೃತ & ಚಿತ್ರಕಲಾ ಕಾಲೇಜುಗಳಿಗೆ ಸಂಬಂಧಿಸಿದಂತೆ ದಿನಾಂಕ:05.06.2023 ರಂದು ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳು, ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಲಭ್ಯವಿರುವ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಕಾಲೇಜುಗಳಲ್ಲಿ ಇನ್ನೂ ಉಳಿಕೆಯಾಗಿರುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು 2022-23ನೇ ಶೈಕ್ಷಣಿಕ ಸಾಲಿನ ಉಳಿದ ಅವಧಿಗೆ ಆಯ್ಕೆ ಮಾಡಿಕೊಳ್ಳಲು **ದಿನಾಂಕ:21.06.2023 ರಂದು 2ನೇ ಹಂತದ ಆನ್‌ಲೈನ್ ಕೌನ್ಸಿಲಿಂಗ್ ಅನ್ನು** ಆಯೋಜಿಸಲಾಗಿದೆ.

ಅದರಂತೆ, ಅರ್ಹ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದ್ದು, ಅಭ್ಯರ್ಥಿಗಳು ಮೇಲ್ಕಂಡ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ತಿಳಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2) ಸಂಬಂಧಪಟ್ಟ ಅಭ್ಯರ್ಥಿಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ